## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ : 147 (16)

ಸದಸ್ಯರ ಹೆಸರು : ಶ್ರೀ. ವಿನಯ್ ಕಾರ್ತಿಕ್ ಪ್ರಕಾಶ್
(ಮಾನ್ಯ ವಿಧಾನಸಭೆಯಿಂದ ಚುನಾಯಿತರಾದ ಸದಸ್ಯರು)

ಉತ್ತರಿಸಬೇಕಾದ ದಿನಾಂಕ : 17.08.2026

ಉತ್ತರಿಸುವ ಸಚಿವರು : ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಗ್ರಾಮೀಣ ಭಾಗದಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆಗಳು ಮೂಲಭೂತ ಸೌಲಭ್ಯಗಳ ಕೊರತೆಯಿಂದಾಗಿ ತಮ್ಮ ಅಸ್ತಿತ್ವವನ್ನೇ ಕಳೆದುಕೊಳ್ಳುವ ಸಂಕಷ್ಟದ ಪರಿಸ್ಥಿತಿಗೆ ತಲುಪಿರುವುದರಿಂದ. ಗ್ರಾಮೀಣ ಭಾಗದ ಬಡ ಮಕ್ಕಳು ಶಿಕ್ಷಣದಿಂದಲೇ ಶಾಶ್ವತವಾಗಿ ವಂಚಿತರಾಗುತ್ತಿರುವ ವಿದ್ಯಮಾನ ಸರ್ಕಾರದ ಗಮನಕ್ಕೆ ಬಂದಿದೆಯ: | ಶಿಕ್ಷಣ ಹಕ್ಕು ಕಾಯ್ದೆ-2009 ಮತ್ತು ಕರ್ನಾಟಕ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು-2012 ರಂತೆ 6 ರಿಂದ 14 ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೂ ಕಡ್ಡಾಯ ಶಿಕ್ಷಣವನ್ನು ನೀಡುವುದು ಸರ್ಕಾರದ ಆದ್ಯ ಕರ್ತವ್ಯವಾಗಿದೆ. ಅದರಂತೆ ಶಾಲಾ ವಯಸ್ಸಿನ ಎಲ್ಲಾ ಮಕ್ಕಳಿಗೆ ಶಿಕ್ಷಣದ ಅವಕಾಶವನ್ನು ಮಾಡಿಕೊಡಲಾಗಿದೆ.<br><br>ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಸರ್ಕಾರಿ ಶಾಲಾ ಮಕ್ಕಳಿಗೆ ವಿದ್ಯಾವಿಕಾಸ ಯೋಜನೆಯಡಿ ಉಚಿತವಾಗಿ ನೀಡಲಾಗುತ್ತಿರುವ ಸೌಲಭ್ಯಗಳು ಈ ಕೆಳಕಂಡಂತಿವೆ.<br><br>• ರಾಜ್ಯದಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳ 1 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಉಚಿತವಾಗಿ ಎರಡು ಜೊತೆ ಸಮವಸ್ತ್ರ ಸರಬರಾಜು ಮಾಡಲಾಗುತ್ತದೆ.<br><br>• 1ನೇ ತರಗತಿಯಿಂದ 12ನೇ ತರಗತಿ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳು, 4ರಿಂದ 9ನೇ ತರಗತಿ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳಿಗೆ ಅಭ್ಯಾಸ ಪುಸ್ತಕಗಳು, 1ರಿಂದ 12ನೇ ತರಗತಿಯ ವಿದ್ಯಾರ್ಥಿಗಳಿಗೆ ಶಾಲಾ ದಿನಚರಿ ಪುಸ್ತಕ, 1 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ ಪಠ್ಯಕ್ರಮ ಸಹಿತ ಮೌಲ್ಯಶಿಕ್ಷಣ ಪಠ್ಯಪುಸ್ತಕಗಳು ಮತ್ತು ಪೂರ್ವ ಪ್ರಾಥಮಿಕ ತರಗತಿ ವಿದ್ಯಾರ್ಥಿಗಳಿಗೆ ದ್ವಿಭಾಷಾ ಬಾಲಚೇತನ ಚಟುವಟಿಕೆ ಪುಸ್ತಕಗಳನ್ನು ಮುದ್ರಿಸಿ ಉಚಿತವಾಗಿ ನೀಡಲಾಗುತ್ತಿದೆ. |

- ರಾಜ್ಯದಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳ 1 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಉಚಿತವಾಗಿ ಒಂದು ಜೊತೆ ಶೂ, ಎರಡು ಸಾಕ್ಸ್ ಗಳನ್ನು ಉಚಿತವಾಗಿ ವಿತರಿಸಲಾಗುತ್ತಿದೆ.

ಮಧ್ಯಾಹ್ನ ಉಪಹಾರ ಹಾಗೂ ಕ್ಷೀರ ಭಾಗ್ಯ ಯೋಜನೆಯಡಿ ಸರ್ಕಾರಿ ಶಾಲೆಗಳ ಪೂರ್ವ ಪ್ರಾಥಮಿಕ ತರಗತಿ ವಿದ್ಯಾರ್ಥಿಗಳು ಹಾಗೂ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬಿಸಿ ಹಾಲು, ಮಧ್ಯಾಹ್ನದ ಬಿಸಿಯೂಟ ಮತ್ತು ಪೂರಕ ಪೌಷ್ಟಿಕ ಆಹಾರದ ರೂಪದಲ್ಲಿ ಮೊಟ್ಟೆ/ಬಾಳೆಹಣ್ಣನ್ನು ನೀಡಲಾಗುತ್ತಿದೆ.

ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ನಿಗದಿಪಡಿಸಿ ಮಾನದಂಡಗಳಂತೆ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರನ್ನು ಒದಗಿಸಲಾಗಿದೆ.

ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳ ಮೂಲಭೂತ ಸೌಲಭ್ಯಗಳಿಗಾಗಿ ಈ ಕೆಳಕಂಡಂತೆ ಕಾಮಗಾರಿಗಳನ್ನು ಮಂಜೂರು ಮಾಡಿ ಮೂಲಸೌಕರ್ಯಗಳನ್ನು ಒದಗಿಸಲಾಗಿದೆ. ಕಳೆದ ಎರಡು ವರ್ಷಗಳಲ್ಲಿ (2024-25 ಮತ್ತು 2025-26) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳ ನೂತನ ಕೊಠಡಿ ನಿರ್ಮಾಣ ಹಾಗೂ ದುರಸ್ತಿಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ.

ಶಾಲಾ ಕೊಠಡಿಗಳ ದುರಸ್ತಿ:-

ರೂ. ಲಕ್ಷಗಳಲ್ಲಿ

| ವರ್ಷ | ಬಿಡುಗಡೆಯಾದ ಅನುದಾನ |
|---|---|
| 2024-25 | 15129.66 |
| 2025-26 | 9688.89 |
| **ಒಟ್ಟು** | **24818.55** |

ಶಾಲಾ ಕೊಠಡಿಗಳ ನಿರ್ಮಾಣ:-

ರೂ. ಲಕ್ಷಗಳಲ್ಲಿ

| ವರ್ಷ | ಬಿಡುಗಡೆಯಾದ ಅನುದಾನ |
|---|---|
| 2024-25 | 13872.25 |
| 2025-26 | 33682.00 |
| **ಒಟ್ಟು** | **47554.25** |

<table>
<tr>
<td></td>
<td></td>
<td>ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಕಳೆದ ಎರಡು ವರ್ಷದಲ್ಲಿ ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಹೊಸ ಕಟ್ಟಡ/ ಶಾಲಾ ಕೊಠಡಿಗಳ ದುರಸ್ತಿಗಾಗಿ ಒದಗಿಸಿರುವ ಅನುದಾನದ ವಿವರ ಈ ಕೆಳಕಂಡಂತಿದೆ:-<br>ರೂ. ಲಕ್ಷಗಳಲ್ಲಿ
<table>
<tr><th rowspan="2">ಕ್ರ.ಸಂ</th><th rowspan="2">ವಿವರ</th><th colspan="2">2024-25</th><th colspan="2">2025-26</th></tr>
<tr><th>ಭೌತಿಕ</th><th>ಆರ್ಥಿಕ</th><th>ಭೌತಿಕ</th><th>ಆರ್ಥಿಕ</th></tr>
<tr><td>1</td><td>SSK PAB - NSB</td><td>1</td><td>210.25</td><td>6</td><td>1261.5</td></tr>
<tr><td>2</td><td>SSK PAB - Repairs</td><td>135</td><td>1364.97</td><td>134</td><td>1337.25</td></tr>
<tr><td>3</td><td>PM Shri - Repairs</td><td>237</td><td>677.00</td><td>154</td><td>614.00</td></tr>
<tr><td>4</td><td>ರಾಜ್ಯವಲಯ - Repairs</td><td>-</td><td>-</td><td>5</td><td>36.71</td></tr>
<tr><td colspan="2">ಒಟ್ಟು</td><td>373</td><td>2252.22</td><td>299</td><td>3249.46</td></tr>
</table>
ಪ್ರತಿ ವರ್ಷ ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಹಾಗೂ ಅವಶ್ಯವಿರುವ ಮೂಲಸೌಲಭ್ಯಗಳ ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು ಆಧರಿಸಿ ಅರ್ಹತೆ ಮತ್ತು ಆದ್ಯತೆಯಂತೆ ಕ್ರಿಯಾಯೋಜನೆಯನ್ನು ರೂಪಿಸಿ, ಅನುದಾನದ ಲಭ್ಯತೆಗೆ ಅನುಗುಣವಾಗಿ ಅನುಮೋದನೆ ನೀಡಿ ಮೂಲಸೌಲಭ್ಯಗಳನ್ನು ಒದಗಿಸಿ ಕೊರತೆಯನ್ನು ನೀಗಿಸಲು ಕ್ರಮ ವಹಿಸಲಾಗುತ್ತಿದೆ.</td>
</tr>
<tr>
<td>ಆ)</td>
<td>ಬಂದಿದ್ದಲ್ಲಿ, ಪ್ರಾಥಮಿಕ ಶಾಲಾ ಶಿಕ್ಷಣವನ್ನು ಸದೃಢಗೊಳಿಸಲು ರಾಜ್ಯದಲ್ಲಿ ಲಭ್ಯವಿರುವ ಸಂಪೂರ್ಣ ಸಿಎಸ್‌ಆರ್ ನಿಧಿಯನ್ನು ಗ್ರಾಮೀಣ ಭಾಗದಲ್ಲಿ ಅತ್ಯುತ್ತಮ ಮೂಲಸೌಕರ್ಯ ಇರುವ</td>
<td>ಸಮುದಾಯ ಮತ್ತು ಕಾರ್ಪೋರೇಟ್ ಸಾಮಾಜಿಕ ಹೊಣೆಗಾರಿಕೆ (ಸಿ.ಸಿ.ಎಸ್.ಆರ್) ಮಾರ್ಗಸೂಚಿಗಳಂತೆ ಕಂಪನಿಗಳು, ಟ್ರಸ್ಟ್‌ಗಳು, ಸಂಸ್ಥೆಗಳು, ಪ್ರತಿಷ್ಠಾನಗಳು, ಎನ್.ಜಿ.ಓ.ಗಳು, ಜ್ಞಾನ ಪಾಲುದಾರರು, ದತ್ತಿ ಸಂಸ್ಥೆಗಳು ಮುಂತಾದ ಸಾಮುದಾಯಿಕ ಸಹಭಾಗಿತ್ವದ ಸಂಸ್ಥೆಗಳ ಮೂಲಕ 1000 ಸರ್ಕಾರಿ ಶಾಲೆಗಳನ್ನು</td>
</tr>
</table>

| | | |
|---|---|---|
| | ಶಾಲೆಗಳನ್ನು ನಿರ್ಮಿಸುವ ಯೋಜನೆಗೆ ಮಾತ್ರವೇ ವಿನಿಯೋಗಿಸಬೇಕೆಂಬ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ; | ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ (ಕೆ.ಪಿ.ಎಸ್) ಉನ್ನತೀಕರಿಸಲು ಕ್ರಮವಹಿಸಲಾಗುತ್ತಿದ್ದು, ಗ್ರಾಮೀಣ ಭಾಗದ ಶಾಲೆಗಳಿಗೆ ಹೆಚ್ಚಿನ ಪ್ರಾಧಾನ್ಯತೆ ನೀಡಲಾಗುತ್ತಿದೆ.<br>ಇದಲ್ಲದೇ ಸ್ಥಳೀಯ ದಾನಿಗಳು ಮತ್ತು ಸಂಸ್ಥೆಗಳ ಮೂಲಕ ಇತರೆ ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯಗಳನ್ನು ಒದಗಿಸಿ ಅಭಿವೃದ್ಧಿಪಡಿಸಲು ಅವಕಾಶ ಕಲ್ಪಿಸಿದೆ. |
| ಇ) | ಗ್ರಾಮೀಣ ಭಾಗದ ಮಕ್ಕಳಿಗೆ ನಗರ ಪ್ರದೇಶಗಳಲ್ಲಿ ಸಿಗುವಂತಹ ಗುಣಮಟ್ಟದ ಶಿಕ್ಷಣ ದೊರೆಯುವಂತಾಗಬೇಕಾದರೆ ರಾಜ್ಯದಲ್ಲಿ ಪ್ರಸ್ತುತ ಸುಮಾರು 10 ಸಾವಿರ ಕೋಟಿಯಷ್ಟು ಸಿಎಸ್ಆರ್ ನಿಧಿ ಲಭ್ಯವಿರುವ ಮಾಹಿತಿ ಇದ್ದು, ಅದರ ಪ್ರತಿ ಪೈಸೆ ಕೂಡ ಸಂಪೂರ್ಣವಾಗಿ ಗ್ರಾಮೀಣ ಭಾಗದ ಪ್ರಾಥಮಿಕ ಶಿಕ್ಷಣಕ್ಕೆ ಮಾತ್ರವೇ ವಿನಿಯೋಗವಾಗಬೇಕಾಗಿರುವ ನಿಟ್ಟಿನಲ್ಲಿ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಗ್ರಾಮೀಣ ಭಾಗದ ಶಾಲೆಗಳಿಗೆ ಹೆಚ್ಚಿನ ಪ್ರಾಧಾನ್ಯತೆ ನೀಡಲಾಗುತ್ತಿದ್ದು, .ಸಿ.ಎಸ್.ಆರ್ ನಿಧಿಯ ಸಹಾಯದಿಂದ 1000 ಕೆ.ಪಿ.ಎಸ್. ಶಾಲೆಗಳನ್ನು ಅಭಿವೃದ್ಧಿಗೊಳಿಸಲು ಸಮುದಾಯ ಮತ್ತು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿ.ಸಿ.ಎಸ್.ಆರ್) ಮಾರ್ಗಸೂಚಿಗಳನ್ನು ರಚಿಸಲಾಗಿದೆ.<br>"ಪ್ರತಿ ಮಗುವೂ ಶಾಲೆಯಲ್ಲಿ ಉತ್ತಮ ಕಲಿಕೆಯೊಂದಿಗೆ" ಎಂಬ ನೀತಿ ಮತ್ತು "ಉತ್ತಮ ಕಲಿಕೆ ಉಜ್ವಲ ಭವಿಷ್ಯ" ಧ್ಯೇಯವಾಕ್ಯದೊಂದಿಗೆ ಅಸ್ತಿತ್ವದಲ್ಲಿರುವ ಸರ್ಕಾರಿ ಶಾಲೆಗಳ ಆಡಳಿತಾತ್ಮಕ, ಶೈಕ್ಷಣಿಕ ಮತ್ತು ಕ್ರಿಯಾತ್ಮಕ ಸಂಯೋಜನೆಯೊಂದಿಗೆ ಪೂರ್ವ ಪ್ರಾಥಮಿಕ ತರಗತಿಯಿಂದ 12ನೇ ತರಗತಿವರೆಗೆ ಕನಿಷ್ಠ 1200 ವಿದ್ಯಾರ್ಥಿಗಳಿಗೆ ಒಂದೇ ಆವರಣದಲ್ಲಿ ಗುಣಾತ್ಮಕ ಶಿಕ್ಷಣ ನೀಡುವ ಸಲುವಾಗಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು (ಕೆ.ಪಿ.ಎಸ್) ಪ್ರಾರಂಭಿಸಲಾಗಿದೆ.<br>ಪ್ರತಿ ಗ್ರಾಮ ಪಂಚಾಯಿತಿಗೆ ಕನಿಷ್ಠ ಒಂದು ಶಾಲೆಯನ್ನು ಆಯ್ಕೆ ಮಾಡಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಲು ಕ್ರಮ ವಹಿಸಲಾಗುತ್ತಿದೆ. ಸರ್ಕಾರಿ ಶಾಲೆಗಳ ಸಮಗ್ರ ಅಭಿವೃದ್ಧಿಗಾಗಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಪರಿವರ್ತಿಸುವ ಮೂಲಕ ಗುಣಮಟ್ಟವನ್ನು ಸುಧಾರಿಸಲು ಮಹತ್ವಾಕಾಂಕ್ಷಿ ಶಾಲೆಗಳನ್ನು ಗುರುತಿಸಲಾಗಿದೆ.<br>ಈಗಾಗಲೇ ವಿವಿಧ ಯೋಜನೆಗಳಡಿ ಪೂರ್ವ ಪ್ರಾಥಮಿಕ ತರಗತಿಯಿಂದ 12ನೇ ತರಗತಿವರೆಗೆ ಕನಿಷ್ಠ 1200 ವಿದ್ಯಾರ್ಥಿಗಳಿಗೆ ಒಂದೇ ಆವರಣದಲ್ಲಿ ಗುಣಾತ್ಮಕ ಶಿಕ್ಷಣ ನೀಡುವ ಸಲುವಾಗಿ 1672 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಿ |

| | | |
|---|---|---|
| | | ಅಭಿವೃದ್ಧಿಗೊಳಿಸಲಾಗುತ್ತಿದೆ.<br><br>ಪ್ರಸ್ತುತ ಸಮುದಾಯ ಮತ್ತು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿ.ಸಿ.ಎಸ್.ಆರ್) ಮಾರ್ಗಸೂಚಿಗಳಂತೆ ಕಂಪನಿಗಳು, ಟ್ರಸ್ಟ್‌ಗಳು, ಸಂಸ್ಥೆಗಳು, ಪ್ರತಿಷ್ಠಾನಗಳು, ಎನ್.ಜಿ.ಓ.ಗಳು, ಜ್ಞಾನ ಪಾಲುದಾರರು, ದತ್ತಿ ಸಂಸ್ಥೆಗಳು ಮುಂತಾದ ಸಾಮುದಾಯಿಕ ಸಹಭಾಗಿತ್ವದ ಸಂಸ್ಥೆಗಳ ಮೂಲಕ 1000 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಲು ಕ್ರಮವಹಿಸಲಾಗುತ್ತಿದ್ದು, ಗ್ರಾಮೀಣ ಭಾಗದ ಶಾಲೆಗಳಿಗೆ ಹೆಚ್ಚಿನ ಪ್ರಾಧಾನ್ಯತೆ ನೀಡಲಾಗುತ್ತಿದೆ. |
| ಈ) | ಭವಿಷ್ಯದಲ್ಲಿ ಸಂಗ್ರಹವಾಗುವ ಸಿಎಸ್‌ಆರ್ ನಿಧಿಯ ಸಂಪೂರ್ಣ ಮೊತ್ತ ಕೂಡ ಪೂರ್ಣ ಪ್ರಮಾಣದಲ್ಲಿ ಗ್ರಾಮೀಣ ಭಾಗದಲ್ಲಿ ಅತ್ಯುತ್ತಮ ಮೂಲಸೌಕರ್ಯ ಇರುವ ಶಾಲೆಗಳನ್ನು ನಿರ್ಮಿಸುವ ಯೋಜನೆಗೆ ಮಾತ್ರವೇ ವಿನಿಯೋಗವಾಗುವಂತೆ ನೋಡಿಕೊಳ್ಳಲು ಸರ್ಕಾರ ವಹಿಸುವ ಕ್ರಮಗಳೇನು? | ಗ್ರಾಮೀಣ ಭಾಗದ ಶಾಲೆಗಳಿಗೆ ಹೆಚ್ಚಿನ ಪ್ರಾಧಾನ್ಯತೆ ನೀಡಲಾಗುತ್ತಿದ್ದು, ಸಮುದಾಯ ಮತ್ತು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿ.ಸಿ.ಎಸ್.ಆರ್) ಮಾರ್ಗಸೂಚಿಗಳನ್ನು ರೂಪಿಸಿ, ಅಳವಡಿಸಿಕೊಂಡು, ನಿಗದಿಪಡಿಸಿದ ಮಾನದಂಡಗಳಂತೆ ರಾಜ್ಯದಾದ್ಯಂತ 1000 ಸರ್ಕಾರಿ ಶಾಲೆಗಳನ್ನು ಕಂಪನಿಗಳು, ಟ್ರಸ್ಟ್‌ಗಳು, ಸಂಸ್ಥೆಗಳು, ಪ್ರತಿಷ್ಠಾನಗಳು, ಎನ್.ಜಿ.ಓ.ಗಳು, ಜ್ಞಾನ ಪಾಲುದಾರರು, ದತ್ತಿ ಸಂಸ್ಥೆಗಳು ಮುಂತಾದ ಸಾಮುದಾಯಿಕ ಸಹಭಾಗಿತ್ವದ ಸಂಸ್ಥೆಗಳ ಮೂಲಕ ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ (ಕೆ.ಪಿ.ಎಸ್.) ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುತ್ತಿದೆ.<br><br>ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕೆ ರಾಜ್ಯ ಹಂತದಲ್ಲಿ ಕರ್ನಾಟಕ ರಾಜ್ಯ ಸಿ.ಸಿ.ಎಸ್.ಆರ್. ಮೇಲ್ವಿಚಾರಣಾ ಸಮಿತಿ, ಶಾಲಾ ಶಿಕ್ಷಣ ಇಲಾಖೆ ಹಂತದಲ್ಲಿ ಶಾಲಾ ಶಿಕ್ಷಣ ಸಿ.ಸಿ.ಎಸ್.ಆರ್. ಕೋಶ ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸಿ.ಸಿ.ಎಸ್.ಆರ್. ಕೋಶ ಮತ್ತು ಜಿಲ್ಲಾ ಹಂತದಲ್ಲಿ ಜಿಲ್ಲಾ ಸಿ.ಸಿ.ಎಸ್.ಆರ್. ಕೋಶಗಳನ್ನು ಸ್ಥಾಪಿಸಲಾಗಿದೆ.<br><br>ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ಸಿ.ಸಿ.ಎಸ್.ಆರ್. ಕೋಶವು ಸಿ.ಸಿ.ಎಸ್.ಆರ್. ಅಡಿಯಲ್ಲಿ ಅಭಿವೃದ್ಧಿಪಡಿಸಬೇಕಾದ ಮತ್ತು ಶಾಲೆಗಳಲ್ಲಿ Corpus Fund ಸ್ಥಾಪಿಸಬೇಕಾಗಿರುವ ಕೆ.ಪಿ.ಎಸ್. ಶಾಲೆಗಳಾಗಿ ಉನ್ನತೀಕರಿಸಬೇಕಾಗಿರುವ 1000 ಶಾಲೆಗಳಲ್ಲಿ ತಮ್ಮ ಜಿಲ್ಲೆಯ ಶಾಲೆಗಳನ್ನು ಕೆ.ಪಿ.ಎಸ್ ಶಾಲೆಗಳನ್ನಾಗಿ ಉನ್ನತೀಕರಿಸಿ, ಅಭಿವೃದ್ಧಿಪಡಿಸಲು ಜಿಲ್ಲಾ ಮಟ್ಟದಲ್ಲಿ |

| | | |
|---|---|---|
| | | ಕಾರ್ಪೊರೇಟ್ ಸಂಸ್ಥೆಗಳಿಗೆ ಪ್ರಾಥಮಿಕ ಸಂಪರ್ಕ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರತಿ ತಿಂಗಳು ಕೆ.ಪಿ.ಎಸ್ ಶಾಲೆಗಳ ಅಭಿವೃದ್ಧಿಗೆ ಸಹಕಾರ ನೀಡಬಹುದಾದ ಪಾಲುದಾರರೊಂದಿಗೆ ಸಭೆ ನಡೆಸಿ ಸಹಕಾರ ಕೋರುತ್ತಿದ್ದಾರೆ. ಸಿ.ಸಿ.ಎಸ್.ಆರ್. ಮತ್ತು ಕೆ.ಪಿ.ಎಸ್. ಮಾರ್ಗಸೂಚಿಗಳಿಗೆ ಅನುಗುಣವಾಗಿ ಸ್ಥಳೀಯ ಒಳನೋಟಗಳನ್ನು ಒದಗಿಸುವ ಮತ್ತು ಕಾರ್ಯಸಾಧ್ಯತೆಗಳನ್ನು ಪರಿಶೀಲಿಸುವ ಮೂಲಕ ಸಿ.ಸಿ.ಎಸ್.ಆರ್. ಪ್ರಸ್ತಾವನೆಗಳನ್ನು ಪರಿಶೀಲಿಸಿ ಪಾಲುದಾರರೊಂದಿಗೆ ತಿಳುವಳಿಕೆ ಒಪ್ಪಂದ (MoU) ಮಾಡಿಕೊಳ್ಳಲು ಕ್ರಮವಹಿಸುತ್ತಿದ್ದಾರೆ. ಈ ರೀತಿ ಪಾಲುದಾರರೊಂದಿಗೆ ಮಾಡಿಕೊಳ್ಳುವ ತಿಳುವಳಿಕೆ ಒಪ್ಪಂದ ಪತ್ರ (MoU) ಅವಧಿ ಕನಿಷ್ಠ 03 ವರ್ಷದಿಂದ ಗರಿಷ್ಠ 05 ವರ್ಷಗಳಾಗಿರತಕ್ಕದ್ದು ಎಂದು ತಿಳಿಸಲಾಗಿದೆ.<br><br>ಜಿಲ್ಲಾ ಮಟ್ಟದ ಸಿ.ಸಿ.ಎಸ್.ಆರ್ ಚಟುವಟಿಕೆಗಳಿಗೆ ಪ್ರತ್ಯೇಕ ದೂರವಾಣಿ ಸಂಖ್ಯೆ, ಇಮೇಲ್ ವಿಳಾಸ ನಿರ್ವಹಿಸತಕ್ಕದ್ದು ಮತ್ತು ವಿವರವನ್ನು ಇಲಾಖಾ NSNK CCSR Portal ಮತ್ತು ಜಿಲ್ಲಾಧಿಕಾರಿಗಳ ಜಾಲತಾಣದಲ್ಲಿ ಪ್ರಕಟಿಸಲು ಮತ್ತು ಎಲ್ಲಾ ಕಾರ್ಯನಿರ್ವಹಣಾ ದಿನಗಳಂದು ಕೆ.ಪಿ.ಎಸ್ ಶಾಲೆಗಳ ಅಭಿವೃದ್ಧಿಗೆ ಸಹಕಾರ ನೀಡಬಯಸುವ ಸಂಸ್ಥೆಗಳು/ದಾನಿಗಳು ಕೋರುವ ಎಲ್ಲಾ ಅಗತ್ಯ ಮಾಹಿತಿಯನ್ನು ನೀಡಲು ಕ್ರಮವಹಿಸಲು ನಿರ್ದೇಶನ ನೀಡಲಾಗಿದೆ.<br><br>100 ದಿನಗಳಲ್ಲಿ 100 ಸರ್ಕಾರಿ ಶಾಲೆಗಳನ್ನು ಸಮುದಾಯ ಮತ್ತು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆಯಡಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ (ಕೆ.ಪಿ.ಎಸ್.) ಅಭಿವೃದ್ಧಿಪಡಿಸಲು ಕಂಪನಿಗಳು, ಟ್ರಸ್ಟ್ ಗಳು, ಸಂಸ್ಥೆಗಳು, ಪ್ರತಿಷ್ಠಾನಗಳು, ಎನ್.ಜಿ.ಓ. ಗಳು, ಜ್ಞಾನ ಪಾಲುದಾರರು, ದತ್ತಿ ಸಂಸ್ಥೆಗಳು ಮುಂತಾದ ಸಾಮುದಾಯಿಕ ಸಹಭಾಗಿತ್ವದ ಸಂಸ್ಥೆಗಳೊಂದಿಗೆ ತಿಳುವಳಿಕೆ ಒಪ್ಪಂದ (MoU) ಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ : EP 61 EGOV 2026

ಎಸ್. ಮಧು ಬಂಗಾರಪ್ಪ
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು